## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

### ಅಕ್ಟೋಬರ್ 2021ರ ಮಾಹೆಯ ವಾರ್ಡ್ ಸಮಿತಿ ಸಭೆಯ ನಡಾವಳಿಗಳು

***********

ಉಲ್ಲೇಖ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21. ದಿನಾಂಕ: 21-09-2020.

******

ದಿನಾಂಕ: 22-10-2021
ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕನಂದ ಉದ್ಯಾನವನ, ಗಿರಿನಗರ
ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಸುನಿಲ್‌ಕುಮಾರ್.ಪಿ | ಮಾನ್ಯ ಮುಖ್ಯ ನಗರ ಯೋಜಕರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಶ್ರೀಧರ್ ಕೋಟ್ರೆ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ |
| 3 | ಶ್ರೀ ಜನಾರ್ಧನ್ | ಸಹಾಯಕ ಕಾರ್ಯಪಾಲಕ ಅಭಿಯಂತರರು.ಗಿರಿನಗರ ಉಪವಿಭಾಗ |
| 4 | ಶ್ರೀ ಲಕ್ಷ್ಮಿ ನಾರಾಯಣ್ | ಕಂದಾಯ ಮೌಲ್ಯ ಮಾಪಕರು, ವಾರ್ಡ್ ನಂ. 162 |
| 5 | ಶ್ರೀ ಚಂದ್ರಶೇಖರ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 162 |
| 6 | ಶ್ರೀ ಕ್ರಿಸ್ಟ್ ಸಲ್ವಾನ್ | ವಾಟರ್ ಪರಿವೀಕ್ಷಕರು. ಬಿ.ಡಬ್ಲ್ಯೂ.ಎಸ್.ಎಸ್.ಬಿ. ಗಿರಿನಗರ |
| 7 | ಶ್ರೀ ಭೂದೇವಿ | ತೋಟಗಾರಿಕೆ ಇಲಾಖೆ.ಪರಿವೀಕ್ಷಕರು |
| 8 | ಶ್ರೀ ಲಕ್ಷ್ಮಿ ದೇವಿ | ಕಿರಿಯ ಅಭಿಯಂತರರು.ಬೆಸ್ಕಾಂ |
| 9 | ಶ್ರೀ ಸತ್ಯ ಅಪ್ಪು | ಸೂಪರ್ ವೈಸರ್ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 162 |
| 10 | ಶ್ರೀ ರಂಜಿತ್.ಎಸ್.ಆರ್ | ವಾರ್ಡ ಮಾರ್ಷಲ್.ವಾರ್ಡ್ ನಂ. 162 |

ಮುಖ್ಯ ನಗರ ಯೋಜಕರು, ಬೆಂಗಳೂರು ಮಹಾನಗರ ಪಾಲಿಕೆ, ಆದ ಶ್ರೀ ಸುನಿಲ್‌ಕುಮಾರ್.ಪಿ ರವರು ಗಿರಿನಗರ ವಾರ್ಡ್ ಸಮಿತಿಯ ನೋಡಲ್ ಅಧಿಕಾರಿಯಾಗಿ ನೇಮಿಸಿರುವ ಬಗ್ಗೆ, ಸ್ವ ಪರಿಚಯ ಮಾಡಿಕೊಂಡು ಹಾಜರಿದ್ದ ಸದಸ್ಯರೆಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ವಾರ್ಡ್‌ನಲ್ಲಿ ಕೋವಿಡ್-19 ಪ್ರಕರಣಗಳಿಗೆ ಸಂಬಂಧಿಸಿದಂತೆ ಆರೋಗ್ಯ ಇಲಾಖೆಯವರಿಗೆ ಸಮರ್ಪಕವಾಗಿ ಔಷಧಿ ಸಿಂಪಡಣೆ ಕಾರ್ಯಗಳನ್ನು ಕೈಗೊಳ್ಳಲು ಸೂಚಿಸಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಜನಸಂದಣಿ ಇರುವ ಸಾರ್ವಜನಿಕ ಪ್ರದೇಶಗಳಲ್ಲಿ ಸಾಮಾಜಿಕ ಅಂತರ (Social Distance) ಕಾಪಾಡಿಕೊಳ್ಳುವುದು ಹಾಗೂ ಮಾಸ್ಕ್ ಧರಿಸುವುದರ ಬಗ್ಗೆ ಅರಿವು ಮೂಡಿಸಲು ಹಾಗೂ ಕ್ರಮಕೈಗೊಳ್ಳಲು ಮಾರ್ಷಲ್‌ಗೆ ಸೂಚಿಸಿದರು.

2. ಗಿರಿನಗರ ವಾರ್ಡ್‌ನಲ್ಲಿ ಒಟ್ಟು ಕೋವಿಡ್-19 ಪ್ರಕರಣಗಳು, ಕೋವಿಡ್-19ನಿಂದ ಒಟ್ಟು ಸಾವು, ಒಟ್ಟು ಚೇತರಿಕೆ ಸಂಖ್ಯೆ ಮತ್ತು ಹಾಲಿ ಕೋವಿಡ್-19 ಪ್ರಕರಣಗಳ ಮಾಹಿತಿಯನ್ನು ಪಡೆದು ಮುಂದಿನ ಸಭೆಯಲ್ಲಿ ಸಲ್ಲಿಸಲು ಆರೋಗ್ಯ ಪರಿವೀಕ್ಷಕರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

3. ಗಿರಿನಗರ ವಾರ್ಡ್-162ರ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಮ್ಯಾನ್ ಹೋಲ್‌ಗಳ ಬಗ್ಗೆಸಾರ್ವ ಜನಿಕರಿಂದ ದೂರು ಬಂದಿದ್ದು, ಕೆಳಮಟ್ಟದಲ್ಲಿರುವ ಮ್ಯಾನ್‌ಹೋಲ್‌ಗಳನ್ನು ಸಾರ್ವಜನಿಕರಿಗೆ ಹಾಗೂ ಸುಗಮ ವಾಹನ ಸಂಚಾರಕ್ಕೆ ಅನುಕೂಲವಾಗುವಂತೆ ರಸ್ತೆ ಮಟ್ಟಕ್ಕೆ ಪುನರ್ ನಿರ್ಮಿಸಲು ಮತ್ತು ಹಾಳಾಗಿರುವ ಮ್ಯಾನ್ ಹೋಲ್‌ಗಳ ಸಂಖ್ಯೆ ಎಷ್ಟು ದುರಸ್ತಿ ಪಡಿಸಿರುವ ಮ್ಯಾನ್ ಹೋಲ್‌ಗಳ ಸಂಖ್ಯೆ ಎಷ್ಟು ಎಂಬುದರ ಬಗ್ಗೆ ಮುಂದಿನ ಸಭೆಯಲ್ಲಿ ಮಾಹಿತಿಯನ್ನು ನೀಡಲು ಸಂಬಂಧಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಸಹಾಯಕ ಅಭಿಯಂತರರಿಗೆ ಸೂಚಿಸಿದರು.

4. ಗಿರಿನಗರ ವಾರ್ಡ್-162ರ ವ್ಯಾಪ್ತಿಯಲ್ಲಿನ ರಸ್ತೆ ಬದಿಯಲ್ಲಿ ಬರುವ ಮರಗಳನ್ನು ಟ್ರಿಮ್ ಮಾಡಲು ಸಭೆಯಲ್ಲಿ ಚರ್ಚಿಸಲಾಯಿತು ಹಾಗೂ ಸಂಬಂಧಪಟ್ಟ ಬಸವನಗುಡಿಯ ಅರಣ್ಯ ಅಧಿಕಾರಿಗಳಿಗೆ ತಿಳಿಸಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

5. ಗಿರಿನಗರ ವಾರ್ಡ್-162ರ ವ್ಯಾಪ್ತಿಯಲ್ಲಿನ ಉದ್ಯಾನವನಗಳಲ್ಲಿ ದೀಪಗಳನ್ನು ನಿರ್ವಹಿಸಲು ಪಾಲಿಕೆಯ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ದಕ್ಷಿಣ ವಲಯದ ಅಧಿಕಾರಿಗಳಿಗೆ ಸೂಚಿಸುವಂತೆ ವಾರ್ಡ್ ಕಾರ್ಯದರ್ಶಿರವರಿಗೆ ಮಾನ್ಯ ಅಧ್ಯಕ್ಷರು ತಿಳಿಸಿದರು.

6. ವಾರ್ಡ್ ವ್ಯಾಪ್ತಿಯ ಮುಖ್ಯರಸ್ತೆಗಳಲ್ಲಿ ಬೆಸ್ಕಾಂ ರವರು ರಸ್ತೆ ಅಗೆತ ಮಾಡಿ ವಿದ್ಯುತ್ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರ ಬಗ್ಗೆ ಹಾಗೂ ಕೇಬಲ್ ರಿಂಗ್‌ಗಳನ್ನು ಪಾದಚಾರಿ ಮಾರ್ಗಗಳಲ್ಲೇ ಬಿಟ್ಟಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗಿದ್ದು, ತುರ್ತಾಗಿ ಸದರಿ ರಿಂಗ್‌ಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಬೆಸ್ಕಾಂನ ಸಹಾಯಕ ಅಭಿಯಂತರರಿಗೆ ತಿಳಿಸಿದರು

7. ಗಿರಿನಗರ ವಾರ್ಡ್-162ರ ವ್ಯಾಪ್ತಿಯ ಗಿರಿನಗರ 1st E ಮುಖ್ಯ ರಸ್ತೆ ರಾಘವೇಂದ್ರ ಸ್ವಾಮಿ ದೇವಸ್ಥಾನ ರಸ್ತೆಯಲ್ಲಿನ ಬೆಸ್ಕಾಂ ಟ್ರಾನ್ಸ್‌ಫಾರ್ಮರ್ ಹತ್ತಿರ 30 ಅಡಿ ಉದ್ದ ರಸ್ತೆ ಅಗೆದಿದ್ದು, ಕೂಡಲೆ ದುರಸ್ತಿ ಪಡಿಸಲು ತಿಳಿಸಲಾಯಿತು.ಹಾಗೂ ಮನೆ ನಂ232 1st H ಕ್ರಾಸ್ ಗಿರಿನಗರ 2nd ಸ್ಟೇಜ್ ಹತ್ತಿರ 11.ಕೆ.ವಿ ಬೆಸ್ಕಾಂ ಕೇಬಲ್ ಲೈನ್ ರಸ್ತೆ ಮೇಲ್ಮೈಯಲ್ಲಿ ಅಳವಡಿಸಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದರಿಂದ ಅದನ್ನು ಸರಿಪಡಿಸಲು ಬೆಸ್ಕಾಂ ಕಿರಿಯ ಅಭಿಯಂತರರು ಲಕ್ಷ್ಮಿದೇವಿಯವರಿಗೆ ಸೂಚಿಸಿದರು.

8. ಗಿರಿನಗರ ವಾರ್ಡ್-162ರ ವ್ಯಾಪ್ತಿಯಲ್ಲಿ ಮಳೆನೀರು ಚರಂಡಿ ಮೇಲ್ಭಾಗದಲ್ಲಿ ಅಲ್ಲಲ್ಲಿ ಇರುವ ಕಸದ ಗುಡ್ಡೆಗಳನ್ನು ತೆರವುಗೊಳಿಸದಿರುವ ಬಗ್ಗೆ ಸಾರ್ವಜನಿಕರಿಂದ ದೂರು ನೀಡಿದ್ದು, ಹಿರಿಯ ಆರೋಗ್ಯ ನಿರೀಕ್ಷಕರು / ಕಿರಿಯ ಆರೋಗ್ಯ ಪರಿವೀಕ್ಷಕರು ಮುಂದಿನ ಸಭೆಗೆ ಕ್ರಮ ಕೈ ಗೊಂಡಿರುವ ವರದಿಯೊಂದಿಗೆ ತಪ್ಪದೆ ಹಾಜರಾಗಲು ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿದರು.

9. ಗಿರಿನಗರ ವಾರ್ಡ್-162ರ ವ್ಯಾಪ್ತಿಯಲ್ಲಿ ರಸ್ತೆಗುಂಡಿ ಮತ್ತು ರಸ್ತೆ ಅಗೆತಗಳನ್ನು ಕಾಮಗಾರಿ ಇಲಾಖೆಯಿಂದ ನಿರ್ವಹಿಸುತ್ತಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ತುರ್ತಾಗಿ ಕ್ರಮ ಕೈಗೊಳ್ಳಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಸೂಚಿಸಿರುತ್ತಾರೆ.

10. ಬೆಂಗಳೂರು ಜಲ ಮಂಡಳಿ ವತಿಯಿಂದ ತಗ್ಗು ಪ್ರದೇಶದಲ್ಲಿರುವ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಲು ತಿಳಿಸಲಾಗಿರುತ್ತದೆ. ಹಾಗೂ ತಮ್ಮ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಮತ್ತು ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರಗಳನ್ನು ಮುಂದಿನ ಸಭೆಯಲ್ಲಿ ಹಾಜರುಪಡಿಸಲು ತಿಳಿಸಲಾಯಿತು.

11. ವಾರ್ಡ್ ವ್ಯಾಪ್ತಿಯಲ್ಲಿ ಕಂದಾಯ ಇಲಾಖೆಗೆ ಸಂಬಂಧಪಟ್ಟಂತೆ ಬಾಕಿ ಉಳಿಸಿಕೊಂಡಿರುವ ಆಸ್ತಿ ತೆರಿಗೆಯನ್ನು ಸಂಬಂಧಪಟ್ಟ ಮಾಲೀಕರುಗಳಿಗೆ ನೋಟೀಸ್ ಜಾರಿ ಮಾಡಿ ಕಂದಾಯ ವಸೂಲಿ ಮಾಡಲು ಅಗತ್ಯ ಕ್ರಮಕೈಗೊಳ್ಳಲು ಕಂದಾಯ ಪರಿವೀಕ್ಷಕರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

12. ಹೊರವರ್ತುಲ ರಸ್ತೆಯ ಫ್ಲೈಓವರ್‌ನ ಕೆಳಭಾಗದಲ್ಲಿ ಗಿಡಗಳನ್ನು ನೆಡುವಂತೆ ಹಾಗೂ ನೆಟ್ಟಿರುವ ಗಿಡಗಳನ್ನು ಸಂರಕ್ಷಿಸುವಂತೆ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ ಸಂಖ್ಯೆ: 162, ಗಿರಿನಗರ | ವಾರ್ಡ್ ಸಮಿತಿಯ<br>ನೋಡಲ್ ಅಧಿಕಾರಿಗಳು ಹಾಗೂ ಮುಖ್ಯನಗರ<br>ಯೋಜಕರು, ಬಿ.ಬಿ.ಎಂ.ಪಿ. |

ಪ್ರತಿಯನ್ನು:

1. ಮಾನ್ಯ ಆಯುಕ್ತರು. ಬೃ.ಬೆ.ಮ.ಪಾಲಿಕೆ. ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಅಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು.ಬಸವನಗುಡಿ ರವರ ಅವಗಾಹನೆಗೆ ಸಲ್ಲಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
೯. ಕಛೇರಿ ಪ್ರತಿ.